ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ.,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್,ಬೆಂಗಳೂರು-86,

# ದಿನಾಂಕ:-04-09-2021ರಂದು ನಡೆದ ವಾರ್ಡ್ ಸಂಖ್ಯೆ:67ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯ :ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್./27/2021-22 ದಿನಾಂಕ:02-09-2021

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ವಿಶ್ವನಾಥ್ | ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ:67 |
| 2. | ಶ್ರೀ ಬಿ.ಸಿ ರವಿಕುಮಾರ್ | ಸಹಾಯಕ ಅಭಿಯಂತರರು ವಾರ್ಡ್-67 ಹಾಗು ಸಮಿತಿ ಕಾರ್ಯದರ್ಶಿಗಳು |
| 3. | ಶ್ರೀ. ಎಚ್ ರಂಗನಾಥ್ | ಸಹಾಯಕ ಕಾರ್ಯಪಾಲಕ ಅಭಿಯಂತರರು, ನಾಗಪುರ ಉಪವಿಭಾಗ |
| 4. | ಶ್ರೀಮತಿ. ಗೀತಾ ಕೀನಾಲ್ | ವಾರ್ಡ್ ಸಮಿತಿ ಸದಸ್ಯರು |
| 5. | ಶ್ರೀಮತಿ. ಮಂಜುಳಾ | ವಾರ್ಡ್ ಸಮಿತಿ ಸದಸ್ಯರು |
| 6. | ಶ್ರೀ ಉದಯ ಶಂಕರ್ | 1ನೇ ಆರ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃಧಿ ಸಂಘ. |
| 7. | ಶ್ರೀ. ಆಕಾಶ್ | ವಾರ್ಡ್ ಸಮಿತಿ ಸದಸ್ಯರು. |
| 8. | ಶ್ರೀ. ರಾಜ್‌ಗೋಪಾಲ್ | ಕಂದಾಯ ಪರೀವಿಕ್ಷಕರು. ವಾರ್ಡ್-67 |
| 9. | ಶ್ರೀ. ಸುನಿಲ್ | ಮಾಷಲ್ ವಾರ್ಡ್ ಸಂಖ್ಯೆ-67. |
| 10. | ಶ್ರೀ. ಲೋಕೆಶ್ | ಪಶು ಇಲಾಖೆ ವಿಭಾಗ. |
| 11. | ಶ್ರೀ. ಮಂಜುನಾಥ್ | ತೋಟಗಾರಿಕೆ ಇಲಾಕೆ (ಮೇಸ್ತ್ರೀ) |
| 12. | ಶ್ರೀ. ಕೆ ಗಂಗಚೆಲುವಯ್ಯ | ಬೆಂಗಳೂರು ಜಲ ಮಂಡಳಿ. |
| 13. | ಶ್ರೀ. ಬಿ ನಟರಾಜ್ | ಸಹಾಯಕ ಪೋಲಿಸ್ ಇನ್ಸಪೆಕ್ಟೆರ್ ಸುಬ್ರ್ಮಣ್ಯನಗರ ಪೋಲಿಸ್ ಠಾಣೆ |
| 14. | ಶ್ರೀ. ಮಂಜು | ಸಹಾಯಕ ಪೋಲಿಸ್ ಇನ್ಸಪೆಕ್ಟೆರ್ ರಾಜಾಜಿನಗರ (ಸಂಚಾರಿ) ಪೋಲಿಸ್ ಠಾಣೆ. |



ಪು.ತಿ.ನೋ.

Scanned by CamScanner

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಸೆಪ್ಟೆಂಬರ್ ಮಾಹೆಯ ಮೊದಲನೇ ಶನಿವಾರ ದಿ:04/09/2021 ರಂದು ಬೆಳಿಗ್ಗೆ 9.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

| | |
|---|---|
| ಶ್ರೀ ಉದಯ ಶಂಕರ್<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ ಆರ್ ಬ್ಲಾಕ್‌ನ ಈಶ್ವರ ದೇವಾಲಯದ ಹತ್ತಿರ ರಸ್ತೆಯ ಬೀದಿ ದೀಪಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿರುವುದಿಲ್ಲ. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಬೀದಿ ದೀಪ ಗುತ್ತಿಗೆದಾರರು ಕ್ರಮವಹಿಸಲು ಸೂಚಿಸಿದರು. |
| ಶ್ರೀ. ಮಂಜು<br>ಸಹಾಯಕ ಪೋಲಿಸ್<br>ಇನ್ಸಪೆಕ್ಟರ್ ರಾಜಾಜಿನಗರ<br>(ಸಂಚಾರಿ) ಪೋಲಿಸ್ ಠಾಣೆ | ವಾರ್ಡ್‌ನ 6ನೇ ಮುಖ್ಯ ರಸ್ತೆ ಹತ್ತಿರ ಮ್ಯಾನ್ ಹೋಲ್ ಉಕ್ಕಿ ಹರಿಯುತ್ತಿರುತ್ತದೆ ಇದರಿಂದ ವಾಹನ ಸವಾರರಿಗೆ ಹಾಗು ಪಾದಚಾರಿಗಳಿಗೆ ತೊಂದರೆ ಉಂಟಾಗುತ್ತಿರುತ್ತದೆ. |
| ಶ್ರೀ. ಕೆ ಗಂಗಚೆಲುವಯ್ಯ<br>ಬೆಂಗಳೂರು ಜಲ ಮಂಡಳಿ | ವಾರ್ಡ್‌ನ ಪೋಲಿಸ್ ಅಧಿಕಾರಿಗಳ ದೂರಿಗೆ ಸಂಭಂದಿಸಿದಂತೆ 6ನೇ ಮುಖ್ಯ ರಸ್ತೆಯ ಹತ್ತಿರ ಪೈಪ್ ಹೊಸದಾಗಿ ಅಳವಡಿಸಲು ಕಾಮಗಾರಿಯನ್ನು ಶೀಘ್ರದಲ್ಲಿ ಪ್ರಾರಂಭಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಮಂಜು<br>ಸಹಾಯಕ ಪೋಲಿಸ್<br>ಇನ್ಸಪೆಕ್ಟರ್ ರಾಜಾಜಿನಗರ<br>(ಸಂಚಾರಿ) ಪೋಲಿಸ್ ಠಾಣೆ | ವಾರ್ಡ್‌ನ ಪಂಚಮುಖಿ ದೇವಾಲಯದ ಹತ್ತಿರ ಪಾದಚಾರಿ ಮಾರ್ಗವು ಹಾಳಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್-67 ಹಾಗು ಸಮಿತಿ<br>ಕಾರ್ಯದರ್ಶಿಗಳು | ವಾರ್ಡ್‌ನ ಪಂಚಮುಖಿ ದೇವಾಲಯದ ರಸ್ತೆಯು ಮೇಜರ್ ರಸ್ತೆಯಾಗಿರುವುದರಿಂದ ಅದನ್ನು ಮೇಜರ್ ರಸ್ತೆ ಸಹಾಯಕ ಕಾರ್ಯಪಾಕ ಅಭಿಯಂತರರಿಗೆ ತಿಳಿಸುವುದಾಗಿ ಸಭೆಯಲ್ಲಿ ತಿಳಿಸಿದರು . |
| ಶ್ರೀ. ಆಕಾಶ್<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ 12ನೇ ಮೈನ್‌ನ ಎಸ್.ಬಿ.ಐ ಬ್ಯಾಂಕ್ ಹತ್ತಿರ ರಸ್ತೆಯಲ್ಲಿ ಗುಂಡಿಯಾಗಿದೆ ವಾಹನ ಸವಾರರಿಗೆ ಹಾಗು ಪಾದಚಾರಿಗಳಿಗೆ ತೊಂದರೆ ಉಂಟಾಗುತ್ತಿರುತ್ತದೆ. |
| ಶ್ರೀ. ಮಂಜು<br>ಸಹಾಯಕ ಪೋಲಿಸ್<br>ಇನ್ಸಪೆಕ್ಟರ್ ರಾಜಾಜಿನಗರ<br>(ಸಂಚಾರಿ) ಪೋಲಿಸ್ ಠಾಣೆ | ವಾರ್ಡ್‌ನ 6ನೇ ಮೈನ್ ಚೈತನ್ಯ ಶಾಲೆ ಹತ್ತಿರ ರಸ್ತೆಯಲ್ಲಿ ಗುಂಡಿಯಾಗಿದೆ ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿರುತ್ತದೆ. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್-67 ಹಾಗು ಸಮಿತಿ<br>ಕಾರ್ಯದರ್ಶಿಗಳು | ವಾರ್ಡ್‌ನ 12ನೇ ಮೈನ್‌ನ ಎಸ್.ಬಿ.ಐ ಬ್ಯಾಂಕ್ ಹತ್ತಿರ ಹಾಗು 6ನೇ ಮೈನ್ ಚೈತನ್ಯ ಶಾಲೆ ಹತ್ತಿರ ರಸ್ತೆಯ ಗುಂಡಿಯಾಗಿರುವುದನ್ನು 3 ದಿನಗಳೊಳಗೆ ಗುಂಡಿಯನ್ನು ಮುಚ್ಚುವುದಾಗಿ ಸಭೆಗೆ ಭರವಸೆ ನೀಡಿದರು. |



ಮು.ತಿ.ನೋ.

Scanned by CamScanner

| | |
|---|---|
| ಘ.ತ್ಯಾ.ನಿ ಪರೀವಿಕ್ಷಕರು<br>ವಾರ್ಡ್ ಸಂಖ್ಯೆ-67 | ಪಾರ್ಕ್‌ನಲ್ಲಿ ಮರ ಗಿಡಗಳ ತುಂಡುಗಳು ಹಾಗು ಒಣ ಎಲೆಗಳನ್ನು ಸ್ವಾಮಿ ವಿವೇಕಾನಂದ ಉದ್ಯಾನದವರು ರಸ್ತೆ ಬದಿಯಲ್ಲಿ ಸುರಿಯುತ್ತಿದ್ದಾರೆ ಇದರಿಂದ ತುಂಬ ಅನಾನುಕುಲವಾಗುತ್ತಿದೆ. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಘ.ತ್ಯಾ.ನಿ ಪರೀವಿಕ್ಷಕರ ದೂರಿನ ಕುರಿತು ತೋಟಗಾರಿಕೆ ಇಲಾಖೆಯವರಿಗೆ ಕ್ರಮ ವಹಿಸಲು ಸೂಚಿಸಲಾಗಿದೆ. |

ಪ್ರತಿಯನ್ನು

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

[signature] 06/09/21
ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್- 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

[signature]
ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು ವಾರ್ಡ್- 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner